## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶಾಲಾ ಮಕ್ಕಳಿಗೆ ಬಿಸಿಊಟ(ಅಕ್ಷರ ದಾಸೋಹ) ಕಾರ್ಯಕ್ರಮದಡಿ ಸರಬರಾಜು ಮಾಡುವ ಆಹಾರ ಧಾನ್ಯಗಳ ಗುಣಮಟ್ಟವನ್ನು ಪರಿಶೀಲಿಸಲು ಜಿಲ್ಲಾ ಮಟ್ಟದಲ್ಲಿ ಜಂಟಿ ತಪಸಣಾ ಸಮಿತಿಯನ್ನು ರಚಿಸುವ ಬಗ್ಗೆ

ಓದಲಾಗಿದೆ:-

1. ಸರ್ಕಾರಿ ಆದೇಶ ಸಂಖ್ಯೆ ಇಡಿ 138 ಎಂಎಂಎಸ್ 2004 ದಿ.17.12.2004
2. ದಿನಾಂಕ 25.5.2006ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಅಕ್ಷರ ದಾಸೋಹ ಕಾರ್ಯಕ್ರಮಕ್ಕೆ ಸಂಬಂಧಿಸಿದ ರಾಜ್ಯ ಮಟ್ಟದ ಚಾಲನಾ ಹಾಗೂ ಪರಾಮರ್ಶಾ ಸಮಿತಿಯ ಸಭೆಯ ನಡವಳಿಗಳು

*********

ಪ್ರಸ್ತಾವನೆ:-

ಮೇಲೆ 1ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಹಾಗೂ ಭಾರತದ ಗೌರವಾನ್ವಿತ ಸರ್ವೋಚ್ಛ ನ್ಯಾಯಾಲಯದ ನಿರ್ದೇಶನದಂತೆ ಬಿಸಿಯೂಟ ಕಾರ್ಯಕ್ರಮದಡಿ ಕೇಂದ್ರ ಸರ್ಕಾರ ಹಾಗೂ ಭಾರತ ಆಹಾರ ನಿಗಮದಿಂದ ಸರಬರಾಜಾಗುತ್ತಿರುವ ಆಹಾರ ಧಾನ್ಯಗಳ (ಅಕ್ಕಿ ಮತ್ತು ಗೋಧಿ) ಗುಣಮಟ್ಟವನ್ನು ಪರಿಶೀಲಿಸಲು ರಾಜ್ಯ ಹಾಗೂ ಭಾರತ ಆಹಾರ ನಿಮಗದವರು ಜಂಟಿಯಾಗಿ ತಪಾಸಣೆ ಕೈಗೊಳ್ಳಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಏಳು ಸದಸ್ಯರನ್ನೊಳಗೊಂಡ ಜಂಟಿ ತಪಾಸಣಾ ಸಮಿತಿಯನ್ನು ರಚಿಸಲಾಗಿತ್ತು.

ಮೇಲೆ 2ರಲ್ಲಿ ಓದಲಾದ ಸಭೆಯಲ್ಲಿ 2004ರ ಸರ್ಕಾರಿ ಆದೇಶದಲ್ಲಿ ರಚಿಸಲಾದ ಜಂಟಿ ತಪಾಸಣಾ ಸಮಿತಿಯು ಜಿಲ್ಲಾಧಿಕಾರಿಗಳ ಇತರೇ ಕಾರ್ಯಬಾಹುಳ್ಯದಿಂದ ಹೆಚ್ಚು ತಪಾಸಣೆಗಳನ್ನು ಮಾಡುತ್ತಿಲ್ಲವಾದ್ದರಿಂದ ಜಿಲ್ಲಾಧಿಕಾರಿಗಳ ಬದಲಿಗೆ ಜಿಲ್ಲಾ ಉಪನಿರ್ದೇಶಕರು (ಆಹಾರ) ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ತಪಾಸಣಾ ಸಮಿತಿಯನ್ನು ಪುನರ್‌ರಚಿಸಲು ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರು ಮಾಡಿದ ಪ್ರಸ್ತಾವನೆಗೆ ಸಮಿತಿಯು ಒಪ್ಪಿಗೆ ನೀಡಿತು.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

### ಸರ್ಕಾರಿ ಆದೇಶ ಸಂಖ್ಯೆ: ಇಡಿ 67 ಎಂಎಂಎಸ್ 2006, ಬೆಂಗಳೂರು ದಿ. 26.6.2006

[ಇಡಿ:67:ಸ್ಕೀಮುರ(ಯುನಿಕ್) 2006 ದಿ.26.6.2006]

ಸರ್ಕಾರಿ ಆದೇಶ ಸಂಖ್ಯೆ ಇಡಿ 138 ಎಂಎಂಎಸ್ 2004 ದಿನಾಂಕ 17.12.2004ರ ಸರ್ಕಾರಿ ಆದೇಶವನ್ನು ಮಾರ್ಪಡಿಸಿ ಈ ಕೆಳಗೆ ನಮೂದಿಸಿರುವ ಅಧಿಕಾರಿಗಳನ್ನೊಳಗೊಂಡ ಜಿಲ್ಲಾ ಮಟ್ಟದ ಜಂಟಿ ತಪಾಸಣಾ ಸಮಿತಿಯನ್ನು ರಚಿಸಲು ಸರ್ಕಾರ ಅನುಮೋದನೆ ನೀಡಿದೆ.

| | | |
|---|---|---|
| 1. | ಜಿಲ್ಲಾ ಉಪನಿರ್ದೇಶಕರು (ಆಹಾರ) | ಅಧ್ಯಕ್ಷರು |
| 2. | ಜಿಲ್ಲಾ ವ್ಯವಸ್ಥಾಪಕರು ಭಾರತೀಯ ಆಹಾರ ನಿಗಮ | ಸದಸ್ಯರು |

27/6



202
27/6/06.

| | | |
|---|---|---|
| 3. | ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ | ಸದಸ್ಯರು |
| 4. | ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯರು |
| 5. | ಜಿಲ್ಲಾ ಆರೋಗ್ಯಾಧಿಕಾರಿಗಳು | ಸದಸ್ಯರು |
| 6. | ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ ಜಿಲ್ಲಾಧಿಕಾರಿಗಳ ಕಛೇರಿ | ಸದಸ್ಯ ಕಾರ್ಯದರ್ಶಿ |

ಮೇಲಿನ ಸಮಿತಿಯು ಅಕ್ಷರ ದಾಸೋಹ ಕಾರ್ಯಕ್ರಮಕ್ಕೆ ಸರಬರಾಜಾಗುತ್ತಿರುವ ಆಹಾರ ಧಾನ್ಯಗಳ ಗುಣಮಟ್ಟವನ್ನು ಪ್ರತಿ ತಿಂಗಳು ಪರಿಶೀಲನೆ ನಡೆಸತಕ್ಕದ್ದು.

ಇದರ ಜೊತೆಗೆ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಮೂಲಕ ಸರಬರಾಜಾಗುತ್ತಿರುವ ಬೇಳೆ, ಎಣ್ಣೆ ಮತ್ತು ಉಪ್ಪಿನ ಗುಣಮಟ್ಟವನ್ನು ಪರಿಶೀಲಿಸಲು ಸೂಚಿಸಿದೆ.

ಸಮಿತಿಯು ತನ್ನ ಮಾಸಿಕ ಪರಿಶೀಲನಾ ವರದಿಯನ್ನು ಪ್ರತಿ ಮಾಹೆ ಸಂಬಂಧಿಸಿದ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕ ಶಿಕ್ಷಣ ಆಯುಕ್ತರಿಗೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಕೆ.ಶ್ರೀಕಂಠೇಶ್ವರ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಸಹಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಯೋಜನೆ)

27/6

ಗೆ:-

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
4. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
5. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ
6. ಎಲ್ಲಾ ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರು, ಭಾರತೀಯ ಆಹಾರ ನಿಗಮ
7. ಎಲ್ಲಾ ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ
8. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ (ಆಡಳಿತ)
9. ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳು
10. ಎಲ್ಲಾ ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ ಎಲ್ಲಾ ಜಿಲ್ಲಾಧಿಕಾರಿಗಳ ಕಛೇರಿ
11. ಅಧೀನ ಕಾರ್ಯದರ್ಶಿ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ
12. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ, ಬೆಂಗಳೂರು
13. ಅಧೀನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
14. ಶಾಖಾ ರಕ್ಷಾ ಕಡತ